Suresh Angadi Education Foundation's

# Angadi International School

(Affiliated CBSE, New Delhi)

WORK SHEET

**Grade : VIII** **Subject : Kannada**

## ಪ್ರಬಂಧ

## ಸಾಮಾಜಿಕ ಪಿಡುಗುಗಳು

ಪೀಠಿಕೆ - ಸಮಾಜದ ಅಭಿವೃದ್ಧಿಗೆ ತೊಡಕ್ಕನ್ನುಂಟು ಮಾಡುವ ಕೆಲವು ಪದ್ಧತಿಗಳನ್ನು ಸಾಮಾಜಿಕ ಪಿಡುಗುಗಳು ಎಂದು ಗುರುತಿಸಲಾಗಿದೆ. ಇಂತಹ ಪದ್ಧತಿಗಳು ನಮ್ಮ ದೇಶವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯಲು ಕಂಟಕವಾಗಿವೆ. ಇವುಗಳನ್ನು ನಿವಾರಿಸಿಕೊಂಡಾಗ ಮಾತ್ರ ಸಮಾಜ ಸ್ವಾಸ್ಥ್ಯವಾಗಿರಬಲ್ಲದು.

ವಿಷಯ ವಿವರಣೆ : ಪ್ರಾಚೀನ ಕಾಲದಿಂದಲೂ ನಮ್ಮ ಸಮಾಜಕ್ಕೆ ಅಂಟಿಕೊಂಡು ಬಂದಿರುವ ಸಮಾಜದ ಅಭಿವೃದ್ಧಿಗೆ ಕಂಟಕವಾಗಿರುವ ಬಡತನ, ಅನಕ್ಷರತೆ, ಬಾಲ್ಯವಿವಾಹ, ವರದಕ್ಷಿಣೆ, ಸ್ತ್ರೀಶೋಷಣೆ, ಭಿಕ್ಷಾಟನೆ, ಜಾತೀಯತೆ, ಅಸ್ಪೃಶ್ಯತೆ, ಸತಿಪದ್ಧತಿ, ದೇವದಾಸಿ ಪದ್ಧತಿ, ಜೀತಪದ್ಧತಿ, ಪರದಾ ಪದ್ಧತಿಯಂತಹ ಸಾಮಾಜಿಕ ಪಿಡುಗುಗಳು ನಮ್ಮನ್ನು ಇಂದಿಗೂ ಕಾಡುತ್ತಿವೆ. ಇಂತಹ ಅನಿಷ್ಟಗಳನ್ನು ಹೋಗಲಾಡಿಸಿದಾಗ ಮಾತ್ರ ನಮ್ಮ ಸಮಾಜದ ಏಳಿಗೆಯಾಗಲು ಸಾಧ್ಯವಿದೆ. ಇಲ್ಲವಾದರೆ ಸಮಾಜ ಅಭಿವೃದ್ಧಿ ಕುಂಠಿತಗೊಂಡು ದಾಸ್ಯದಲ್ಲಿ ಇರಬೇಕಾಗುತ್ತದೆ. ಸಾಮಾಜಿಕ ಪಿಡುಗುಗಳನ್ನು ಹೋಗಲಾಡಿಸಲು ಸಾಕಷ್ಟು ಕಾನೂನುಗಳಿದ್ದರೂ ಪ್ರಯೋಜನವಾಗಿಲ್ಲ. ಇವುಗಳು ಹೀಗೆ ಮುಂದುವರೆಯದಿರಲು ಅನಕ್ಷರತೆಯೆ ಕಾರಣ ಎಂದು ಹೇಳಬಹುದು. ಅಕ್ಷರಸ್ಥರ ಸಂಖ್ಯೆ ಹೆಚ್ಚಿದಂತೆ ಕೆಲವು ಪಿಡುಗುಗಳು ದೂರವಾಗುತ್ತಿವೆ. ಅನಕ್ಷರತೆ ಎಲ್ಲಿ ತಾಂಡವವಾಡುತ್ತಿದಿಯೋ ಅಲ್ಲಿ ಇಂತಹ ಪಿಡುಗುಗಳು ಜೀವಂತವಾಗಿವೆ. ಸಾಮಾಜಿಕ ಪಿಡುಗುಗಳು ಸಮಾಜಕ್ಕೆ ಹಿಡಿದ ಗೆದ್ದಲಿನಂತೆ ಸಮಾಜವನ್ನು ವಿನಾಶದತ್ತ ಕೊಂಡೊಯ್ಯುತ್ತವೆ. ಆದ್ದರಿಂದ ನಮ್ಮ ಸರ್ಕಾರಗಳು ಇನ್ನೂ ಕಠಿಣ ಕಾನೂನುಗಳನ್ನು ಜಾರಿಗೆ ತಂದು ಅದಕ್ಕೆ ಪೂರಕವಾದ ಅರಿವು ಮೂಡಿಸಬೇಕು. ಪ್ರತಿಯೊಬ್ಬರಲ್ಲಿ ವೈಜ್ಞಾನಿಕ ಮನೋಭಾವವನ್ನು ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು. ಸಾಮಾಜಿಕ ಪಿಡುಗುಗಳಿಂದ ಆಗುವ ಅನಾಹುತಗಳನ್ನು ತಿಳಿಸಬೇಕು.ಅಂದಾಗ ಮಾತ್ರ ನಿವಾರಣೆಯಾಗಬಲ್ಲವು.

ಉಪಸಂಹಾರ : ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಮಾಜಿಕ ಪಿಡುಗುಗಳನ್ನು ಬೇರು ಸಹಿತ ಕಿತ್ತೊಗೆಯಬೇಕು. ವಿದ್ಯಾವಂತರು ಮುಂದೆ ಬಂದು ಅನಕ್ಷರಸ್ಥರಲ್ಲಿ ಅರಿವು ಮೂಡಿಸಿ ಆ ಮೂಲಕ ಸಾಮಾಜಿಕ ಪಿಡುಗುಗಳನ್ನು ನಿವಾರಿಸಿ ಸಮಾಜ ಸ್ವಾಸ್ಥ್ಯವಾಗಿರಿಸಲು ಶ್ರಮಿಸಬೇಕು. ಆಗ ಮಾತ್ರ ನಮ್ಮ ದೇಶ ಅಭಿವೃದ್ಧಿ ಪಥದತ್ತ ಸಾಗಲು ಸಾಧ್ಯವೆಂದು ಹೇಳಬಹುದು.